# ಸ್ವಾಮಿ ವಿವೇಕಾನಂದ ಗ್ರಾಮಾಂತರ ಪದವಿ ಪೂರ್ವ ಕಾಲೇಜು

**ಚಂದಾಪುರ, ಆನೇಕಲ್ ತಾ॥, ಬೆಂಗಳೂರು–560099**

ದ್ವಿತೀಯ ಪಿಯುಸಿ ಎರಡನೇ ಮಾಸಿಕ ಕಿರುಪರೀಕ್ಷೆ–ಜುಲೈ–2019

**ಸಮಯ: 1 ಗಂಟೆ** ವಿಷಯ :ಕನ್ನಡ **ಅಂಕಗಳು : 25**

Swamy Vivekananda Rural Pre-University College Chandapura LIBRARY No ........ Date........

ಅ– ವಿಭಾಗ

**I ಒಂದು ವಾಕ್ಯದಲ್ಲಿ ಉತ್ತರಿಸಿ:** 1 x5=5

1. ರಾವಣನಎದುರು ಪ್ರತ್ಯಕ್ಷವಾದ ವಿದ್ಯಾದೇವತೆಯಾರು?
2. ಮಯತನೂಜೆಎಂದರೆಯಾರು?
3. ಸೀತೆಯನ್ನು ರಾವಣ ಎಲ್ಲಿರಿಸಿದ್ದನು?
4. ನಿರೂಪಕರಿಗೆಯಾವ ಕೆಲಸ ಖಾಯಂಮ್ಮಾಗಿತ್ತು?
5. ದುರ್ಗಪ್ಪನ ಪ್ರಕಾರತರ್ಲೆಡಿಪಾರ್ಟ್‌ಮೆಂಟ್‌ಯಾವುದು?

ಅ. ವಿಭಾಗ

**IIಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು– ಮೂರು ವಾಕ್ಯಗಳಲ್ಲಿ ಉತ್ತರಿಸಿರಿ:** 2 x3=6

6. ಸೀತೆಯ ತಲ್ಲಣಕ್ಕೆಕಾರಣವೇನು?
7. ರಾವಣತನ್ನಅಂತ:ಪುರದ ಸ್ತ್ರೀಯರನ್ನು ಹೇಗೆ ಸಂತೈಸಿದನು?
8. ನಮ್ಮಕಡೆಕೆಮ್ಮುವುದುಕಾಲಿಂಗ್ ಬೆಲ್‌ಇದ್ದಹಾಗೆಎಂದು ನಿರೂಪಕರು ಹೇಳುವುದು ಏಕೆ?
9. ದುರ್ಗಪ್ಪ ಏಕೆ ಬಂದಿರಬಹುದೆಂದು ನಿರೂಪಕರು ಯೋಚಿಸಿದರು?

ಇ ವಿಭಾಗ

**IIIಯಾವುದಾದರೂಒಂದು ವಾಕ್ಯದ ಸಂದರ್ಭ ಸೂಚಿಸಿ ವಿವರಿಸಿ:** 3 x1=3

10. ಸಮಧಿಕರಾರ್ ಜಗತ್ತ್ರಯದೊಳಿನ್ನೆನಗೆ?
11. ಬುಟ್ಟಿಗಟ್ಲೆ ಬಿದ್ದಿಲ್ಲವಅದರ ಲದ್ದಿ!

ಈ ವಿಭಾಗ

**IV ಯಾವುದಾದರೂಒಂದು ಪ್ರಶ್ನೆಗೆಐದಾರು ವಾಕ್ಯಗಳಲ್ಲಿ ಉತ್ತರಿಸಿ:** 4x1=4

12. ರಾವಣನ ಮನಃಪರಿವರ್ತನೆಯ ಸಂದರ್ಭವನ್ನು ಕವಿ ಹೇಗೆ ಚಿತ್ರಿಸಿದ್ದಾನೆ?
13. ನಿರೂಪಕರುಕೊಡಲಿ ವಸೂಲಿ ಮಾಡಲು ಹೋಗಲಿಲ್ಲವೇಕೆ? ವಿವರಿಸಿ.

ಉ ವಿಭಾಗ

**Vಕೆಳಗಿನ ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಬರೆಯಿರಿ:**

14. **ಪದಗಳಿಗೆ ಅರ್ಥ ಬರೆಯಿರಿ:** 1 x2=2

ಧುರ ,ಧುರಘ

15. **ಇವುಗಳ ತದ್ಭವರೂಪ ಬರೆಯಿರಿ:** 1 x2=2

ವನ, ಅಮೃತ

**VI ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿರಿ:** 3 x1=3

17.ಹಣಕ್ಕಿಂತಗುಣ ಮುಖ್ಯ

18. ದೇಶಸುತ್ತಬೇಕು, ಕೋಶಓದಬೇಕು.

Swamy Vivekananda Rural Pre-University College
LIBRARY
ACC No ...........
Date ...........
Chandapura

# ಸ್ವಾಮಿ ವಿವೇಕಾನಂದ ಗ್ರಾಮಾಂತರ ಪದವಿ ಪೂರ್ವ ಕಾಲೇಜು

ಚಂದಾಪುರ, ಆನೇಕಲ್ ತಾಲ್ಲೂಕು, ಬೆಂಗಳೂರು–99

**ದ್ವಿತೀಯ ಪಿ.ಯು.ಸಿ ತ್ರೈಮಾಸಿಕ ಪರೀಕ್ಷೆ ಆಗಸ್ಟ್ –2019**

ಅವಧಿ:–1 ಗಂಟೆ 40 ನಿಮಿಷ ವಿಷಯ–ಕನ್ನಡ ಅಂಕಗಳು–50

## ಅ–ವಿಭಾಗ

**I ಅ) ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ.** 5x1=5

1. ಮಯತನೂಜೆ ಎಂದರೆ ಯಾರು?
2. ಯಾರು ಅನ್ಯಲಿಂಗವನ್ನು ನೆನೆಯುವುದಿಲ್ಲ?
3. ವಾಲ್‌ಪರೈ ಈಗ ಹೇಗೆ ಕಾಣುತ್ತಿದೆ?
4. ದುರಾಸೆಯ ಹುಡುಗನನ್ನು ನಿರಾಕರಿಸಿದವರು ಯಾರು?
5. ಆನೆಗೆ ಜಗದ್ದುಗಳನ್ನು ಹೊರುವ ಕೆಲಸ ತಪ್ಪಿಹೋದುದೇಕೆ ?

## ಆ–ವಿಭಾಗ

**II .ಅ) ಯಾವುದಾದರೂ ಒಂದು ಪ್ರಶ್ನೆಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 1x2 =2

6. ರಾವಣನು ಸೊಕ್ಕಿನಿಂದ ಸೀತೆಯನ್ನುದ್ದೇಶಿಸಿ ಆಡಿದ ಮಾತುಗಳಾವುವು?
7. ಯಾರು ಮನೆಮನೆಯನ್ನು ತಿರಿಯನು ? ಕೆರೆಯುದಕವನ್ನರಸದವನು ಯಾರು ?

**ಆ) ಯಾವುದಾದರೂ ಒಂದು ಪ್ರಶ್ನೆಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 1x2=2

8. ಡಾ. ಚಂದ್ರಪ್ಪ ಬಸಲಿಂಗನಿಗೆ ಡಾ.ತಿಮ್ಮಪ್ಪನ ಬಗ್ಗೆ ಕೊಟ್ಟ ಅಭಿಪ್ರಾಯವೇನು?
9. ತಾನು ಅದೃಷ್ಟವಂತೆಯೆಂದು ಲೇಖಕಿ ಭಾವಿಸಲು ಕಾರಣವೇನು?
10. ಸಿಂಹಬಾಲದ ಕೋತಿಗಳಿಗೆ ಒದಗಿದ ತೊಂದರೆ ಏನು ?

**ಇ) ಯಾವುದಾದರೂ ಒಂದು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 1x2=2

11. ಕಾಡಪ್ಪ ಶೆಟ್ಟರು ಯಾವ ವರ್ತಮಾನವನ್ನು ಮುಟ್ಟಿಸಿದರು?
12. ಕಾಡಾನೆಗಳ ಹಾವಳಿಗೆ ಪ್ರಕಾಶ್ ನೀಡಿದ ಕಾರಣಗಳೇನು ?

## ಇ–ವಿಭಾಗ

**III.ಅ) ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ:** 1 x3=3

13. ಉಳಿದವರಳಿವೆನಗೇವುದೆಂ?
14. ತಾನೆ ಲಘುಮಾಡಿ ಲಘುವಾದನಯ್ಯ?

**ಆ) ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ:** 1 x3=3

15. ಬಸಲಿಂಗಪ್ಪ ನೀನು ತುಂಬಾ ಒಳ್ಳೆಯವನು.
16. ಹಾಡುವುದು ಅವುಗಳಿಗೆ ಅನಿವಾರ್ಯ; ಅವುಗಳ ಕರ್ಮ!
17. "ನೋಡು, ನಿನ್ನ ಎದುರು ಎರಡು ಆಯ್ಕೆಗಳಿವೆ"

**ಇ) ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ:** 1 x3=3

18. ಆನೆಗೂ ಮಾನ ಮರ್ಯಾದೆ ಇರುತ್ತೆ ತಿಳ್ಕೋ.
19. ನಿನ್ನ ಪುಕಾರೇನಿದ್ರೂ ಬರ್ವಣಿಗೇಲಿ ಇರಬೇಕು.

## ಈ–ವಿಭಾಗ

IV. ಅ) ಯಾವುದಾದರೂ ಒಂದು ಪ್ರಶ್ನೆಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ: **1 x4=4**

20. ರಾವಣನು ಬಹುರೂಪಿಣೀ ವಿದ್ಯೆಯನ್ನು ಒಲಿಸಿಕೊಂಡ ಸಂದರ್ಭವನ್ನು ವಿವರವಾಗಿ ಬರೆಯಿರಿ.
21. ರಕ್ಷಿಸಬೇಕಾದವರೇ ಭಕ್ಷಕರಾದರೆ ಒದಗುವ ವಿಘಟನೆಯನ್ನು ವಚನಕಾರರು ಹೇಗೆ ಚಿತ್ರಿಸಿದ್ದಾರೆ.

ಆ) ಯಾವುದಾದರೂ ಒಂದು ಪ್ರಶ್ನೆಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ: **1 x4=4**

22. ಬಸಲಿಂಗ ಎದುರಿಸುತ್ತಿದ್ದ ಸಮಸ್ಯೆಗಳು ಯಾವುವು?
23. ಅಭಿವೃದ್ಧಿ ತರುವ ಪ್ರಾಕೃತಿಕ ನಾಶದ ಸ್ವರೂಪವನ್ನು ಪಠ್ಯದ ಹಿನ್ನೆಲೆಯಲ್ಲಿ ಚರ್ಚಿಸಿ.
24. ಬದುಕಿನಲ್ಲಿ ಆಯ್ಕೆಗಳು ಮುಖ್ಯ ಎಂಬುದನ್ನು ಲೇಖಕಿ ಹೇಗೆ ನಿರೂಪಿಸಿದ್ದಾರೆ ?

ಇ) ಯಾವುದಾದರೂ ಒಂದು ಪ್ರಶ್ನೆಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ: **1 x4=4**

25. ಆನೆ ಮತ್ತು ಮಾವುತ ವೇಲಾಯುಧನನ್ನು ಸಾಗಹಾಕಲು ಮಠದವರು ಹವಣಿಸಿದ್ದೇಕೆ ?
26. ಅರಣ್ಯ ಇಲಾಖೆಯ ಶತ್ರುಗಳ ಕಾರ್ಯಭಾರವನ್ನು ನಾಗರಾಜ ವಿವರಿಸಿದ್ದು ಹೇಗೆ ?

## ಉ–ವಿಭಾಗ

V ಅ) ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ: **5x1=5**

27. ಕದಡಿದ ಸಲಿಲಂ ತಿಳಿವಂ
ದದೆ ತನ್ನಿಂ ತಾನೆ ತಿಳಿದ ದಶವದನಂಗಾ
ದುದು ವೈರಾಗ್ಯಂ ಸೀತೆಯೊ
ಳುದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ.

28. ಸೂರ್ಯನಿಲ್ಲದೆ ಹಗಲುಂಟೆ ಅಯ್ಯಾ?
ದೀಪ ಇಲ್ಲದೆ ಬೆಳಕುಂಟೆ ಅಯ್ಯಾ ?
ಪುಷ್ಪವಿಲ್ಲದೆ ಪರಿಮಳವನರಿಯಬಹುದೆ ಅಯ್ಯಾ ?
ಸಕಲವಿಲ್ಲದೆ ನಿಷ್ಕಲವ ಕಾಣಬಾರದು
ಮಹಾಘನ ನಿರಾಳ ಪರಶಿವನಿಂದ ಲಿಂಗವು ತೋರಿತ್ತು,
ಉರಿಲಿಂಗಪೆದ್ದಿಪ್ರಿಯ ವಿಶ್ವೇಶ್ವರಾ ?

## ಭಾಷಾಭ್ಯಾಸ

VI ಅ) ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಮೂರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿರಿ: **3 x2=6**

29. ಈ ಪದಗಳಿಗೆ ಅರ್ಥ ಬರೆಯಿರಿ:
**ಆನನ, ರವ,**
30. ಇವುಗಳ ಕಾಲಸೂಚಕಗಳನ್ನು ಬರೆಯಿರಿ:
**ಬಂದರು, ಹೋಗುವಳು,**
31. ಈ ನುಡಿಗಟ್ಟುಗಳನ್ನು ವಾಕ್ಯದಲ್ಲಿ ಬಳಸಿ:
**ತಲೆಬಾಗು, ಕೈಯೊಡ್ಡು**
32. ಈ ಪದಗಳ ಗುಣವಾಚಕಗಳನ್ನು ಗುರುತಿಸಿ:
**ಹೆಮ್ಮರ, ಶುದ್ಧನೀರು**

ಆ) ಯಾವುದಾದರೂ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ: **1x4=4**

33. ಕನ್ನಡ ಮಾಧ್ಯಮದಲ್ಲಿ ಶಿಕ್ಷಣ.
34. ನೆರೆಹಾವಳಿ.

ಇ) ಈ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ: **1 x3=3**

35. ತುಂಬಿದಕೊಡ ತುಳುಕುವುದಿಲ್ಲ.
36. ಹಣಕ್ಕಿಂತ ಗುಣಮುಖ್ಯ.

# ಸ್ವಾಮಿ ವಿವೇಕಾನಂದಗ್ರಾಮಾಂತರ ಪದವಿ ಪೂರ್ವಕಾಲೇಜು

ಚಂದಾಪುರ, ಆನೇಕಲ್‌ತಾಲ್ಲೂಕು, ಬೆಂಗಳೂರು–99

ದ್ವಿತೀಯ ಪಿ.ಯು.ಸಿ ಅರ್ಧವಾರ್ಷಿಕ ಪರೀಕ್ಷೆ ಅಕ್ಟೋಬರ್–2019

Swamy Vivekananda Rural Pre-University College LIBRARY ACC. No. ........ Date........ * Chandapura *

ಸಮಯ:–3ಗಂಟೆ15 ನಿಮಿಷ ವಿಷಯ–ಕನ್ನಡ ಅಂಕಗಳು–100

## ಅ–ವಿಭಾಗ

**I ಅ) ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ.** 10X1=10

1. ಸೀತೆಯನ್ನು ರಾವಣ ಎಲ್ಲಿರಿಸಿದ್ದನು ?
2. ತನು ಯಾವಾಗ ಕರಗಬೇಕು ?
3. ಮನದೊಳಗೆ ಹಗೆಗಳನು ಹಿಂಡಿದವರಾರು ?
4. ಹಲವು ಹಳ್ಳಗಳು ಸೇರಿ ಏನಾಗುತ್ತದೆ ?
5. ಸರ್ಕಾರಿ ಆಸ್ಪತ್ರೆಯ ಬಗ್ಗೆ ಬಸಲಿಂಗನಲ್ಲಿದ್ದ ಅಭಿಪ್ರಾಯವೇನು ?
6. ಮಾರ್ಷ್‌ನ ಜೊತೆಗಾರನ ಹೆಸರೇನು ?
7. ದುರಾಸೆಯ ಹುಡುಗನನ್ನು ನಿರಾಕರಿಸಿದವರು ಯಾರು ?
8. ನಿರೂಪಕರಿಗೆ ಯಾವ ಕೆಲಸ ಖಾಯಮ್ಮಾಗಿತ್ತು ?
9. ದುರ್ಗಪ್ಪನ ಪ್ರಕಾರ ತರ್ಲೆ ಡಿಪಾರ್ಟ್‌ಮೆಂಟ್ ಯಾವುದು ?
10. ರಹೆಮಾನ್ 'ಐ ವಿಟ್ ನೆಸ್' ಎಂದು ಯಾರನ್ನು ತೋರಿಸಿದರು ?

## ಆ–ವಿಭಾಗ

**II.ಅ) ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 4x2=8

11. ಸೀತೆಯ ತಲ್ಲಣಕ್ಕೆ ಕಾರಣವೇನು ?
12. ಯಾವ ಗುಣಗಳಿಲ್ಲದವನು ಡಾಂಭಿಕನೆನಿಸುತ್ತಾನೆ ?
13. ಸೂರ್ಯ ಮತ್ತು ದೀಪಗಳಿಂದಾಗುವ ಉಪಯೋಗಗಳಾವುವು ?
14. ಹೆಂಡತಿಯ ಹರಿಬಕ್ಕಾಗಿ ಗಂಡುಗೂಸು ಏನು ಮಾಡುತ್ತಾನೆ ?
15. ರಾಜ ಮತ್ತು ಮಂತ್ರಿಗಳಿಗೆ ಯಾವ ಅರ್ಹತೆಗಳಿರಬೇಕೆಂದು ಸೋಮನಾಥನು ಹೇಳಿದ್ದಾನೆ ?

**ಆ) ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 3x2=6

16. ಸಿದ್ಲಿಂಗಿ ಏಕೆ ರಾದ್ಧಾಂತ ಮಾಡಿದಳು ?
17. ಕೈಗಾರಿಕೋದ್ಯಮಿಗಳಿಂದ ಕಾಡು ನಾಶವಾದುದು ಹೇಗೆ ?
18. ಸೀತಾಳ ಓದುವ ಆಸಕ್ತಿ ಹೇಗಿತ್ತು ?
19. ಲೇಖಕರಲ್ಲಿ ಕನ್ನಡ ಪ್ರೀತಿ ಸ್ಫುರಿಸಿದ್ದು ಹೇಗೆ ?

**ಇ) ಯಾವುದಾದರೂ ಮೂರುಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ :** 3x2=6

20. ಕಾಡಾನೆಗಳ ಹಾವಳಿಗೆ ಪ್ರಕಾಶ್ ನೀಡಿದ ಕಾರಣಗಳೇನು ?
21. ನಾಗರಾಜ ದುರ್ಗಪ್ಪನ ಮೇಲೆ ಏನೆಂದುರೇಗಿದನು ?
22. ಸೊರಗಿದ್ದ ಆನೆಯನ್ನು ಕೃಷ್ಣೇಗೌಡ ಹೇಗೆ ಸಾಕಿದ ?
23. ಜಬ್ಬಾರ್ ನಿರೂಪಕರಿಗೆ ಅಂಚೆ ವಿಲೇವಾರಿ ಬಗ್ಗೆ ಅಸಡ್ಡೆಯಿಂದ ಏನು ಹೇಳಿದ ?

## ಇ–ವಿಭಾಗ

**III.ಅ) ಯಾವುದಾದರೂ ಎರಡು ವಾಕ್ಯವನ್ನುಕುರಿತುಸಂದರ್ಭಸೂಚಿಸಿ, ಸ್ವಾರಸ್ಯ ಬರೆಯಿರಿ:** 2x3=6

24. ಉದಾತ್ತನೊಳ್ ಪುಟ್ಟದಲ್ತೆ ನೀಲೀರಾಗಂ.
25. ಪುಷ್ಪವಿಲ್ಲದೆ ಪರಿಮಳವನರಿಯಬಹುದೆ.
26. ಕೆಲಬರು ಗಳಿಸಿದೊಡೆ ಕೆಲರುಂಡುಜಾರುವರು.

**ಆ) ಯಾವುದಾದರೂ ಒಂದು ವಾಕ್ಯವನ್ನುಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ:** 1 x3=3

27. 'ಅದೃಷ್ಟವನ್ನೇ' ಅವಲಂಬಿಸಿ ಬದುಕಲು ಸಾಧ್ಯವೇ?
28. ನಮ್ಮ ಭಾಷೆಯಲ್ಲಿ ಓದಿದ್ದೆ ಮೈಗೆ ಹತ್ತುವುದು.

**ಇ) ಯಾವುದಾದರೂ ಒಂದು ವಾಕ್ಯವನ್ನುಕುರಿತು ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ:** 1 x3=3

29. ನಮ್ಮ ಕಡೆ ಕೆಮ್ಮು ಕಾಲಿಂಗ್‌ಬೆಲ್ ಇದ್ದ ಹಾಗೆ.
30. ಕುಶಾಲಿಗಂತ ಸೊಂಡಿಲು ಬೀಸಿದರೆ ಸಾಕಲ್ಲ.

## ಈ–ವಿಭಾಗ

**IV. ಅ) ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ:** 3X4=12

31. ರಾವಣನಲ್ಲಿ ಕಂಡು ಬರುವ ಪಶ್ಚಾತ್ತಾಪವನ್ನು ಕವಿ ಹೇಗೆ ನಿರೂಪಿಸಿದ್ದಾನೆ ?
32. ರಕ್ಷಿಸಬೇಕಾದವರೆ ಭಕ್ಷಕರಾದರೆ ಒದಗುವ ವಿಘಟನೆಯನ್ನು ಬಸವಣ್ಣನವರು ಹೇಗೆ ಚಿತ್ರಿಸಿದ್ದಾರೆ?
33. ತನಗೊದಗಿದ ಸಂಕಟವನ್ನು ಹೇಳಿಕೊಳ್ಳುವ ದ್ರೌಪದಿಯ ಸ್ವಗತದ ನುಡಿಗಳಾವುವು ?
34. ಜ್ಞಾನವನ್ನು ಹೊಂದುವ ಮಾರ್ಗ ಯಾವುದೆಂಬುದನ್ನು ಕವಿ ಹೇಗೆ ವಿವರಿಸಿದ್ದಾನೆ ?

ಆ) ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ: **2x4=8**

35. ಬಸಲಿಂಗ ಎದುರಿಸುತ್ತಿದ್ದ ಸಮಸ್ಯೆಗಳು ಯಾವುವು?
36. ಲೇಖಕಿಯ ಪತಿಯ ಮೂತ್ರ ಪಿಂಡದಕಲ್ಲು ಕರಗಿ ಹೋಗಿದ್ದು ಹೇಗೆ ?
37. ಕನ್ನಡಿಗರೆನ್ನಿಸಿಕೊಳ್ಳಲು ಯಾವ ಯೋಗ್ಯತೆಯ ಪ್ರಶ್ನೆಗಳು ನಮ್ಮನ್ನು ಚುಚ್ಚಬೇಕು ? ವಿವರಿಸಿ.

ಇ) ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ: **2x4=8**

38. ನಿರೂಪಕರು ಕೊಡಲಿ ವಸೂಲಿ ಮಾಡಲು ಹೋಗಲಿಲ್ಲವೇಕೆ? ವಿವರಿಸಿ.
39. ಡ್ರೈವರ್ ಸಾವಿನ ಸುದ್ದಿಯನ್ನು ಶಿವೇಗೌಡ ಮತ್ತಿತರರು ಹೇಗೆ ಮುಚ್ಚಿಹಾಕಿದರು ?
40. ಜಬ್ಬಾರನ ಬವಣೆಗಳನ್ನು ನಿರೂಪಕರು ಹೇಗೆ ವಿವರಿಸಿದ್ದಾರೆ ?

## ಉ–ವಿಭಾಗ

**V ಅ) ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ:** **1x5=5**

41. ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮೆನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯನೆನ್ನಕುಲದ ಪೆಂಪಳಿವಿನೆಗಂ.

42. ಲಘು ಗುರುವಪ್ಪನೆ ?ಗುರುಲಘುವಪ್ಪನೆ ?ಆಗದಾಗದು.
ಗುರುಗುರುವೆ, ಲಘುಲಘುವೆ.
ಶ್ರೀ ಗುರು ಲಘುವರ್ತನದಲ್ಲಿ ವರ್ತಿಸಿದಡೆ ಆಗದು ಆಚಾರ
ಶ್ರೀ ಗುರು ಲಿಂಗ ಜಂಗಮ ಪ್ರಸಾದವನು
ತಾನೆ ಲಘು ಮಾಡಿ ಲಘುವಾದನಯ್ಯಾ,
ಉರಿಲಿಂಗಪೆದ್ದಿಪ್ರಿಯ ವಿಶ್ವೇಶ್ವರಾ.//

## ಭಾಷಾಭ್ಯಾಸ

**VI ಅ) ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿರಿ:** **6x2=12**

43. ಈ ಪದಗಳಿಗೆ ಅರ್ಥ ಬರೆಯಿರಿ:
**ನಿಷ್ಕಲ, ಹರಿಬ,**
44. ಈ ಕೆಳಗಿನ ಕ್ರಿಯಾಪದಗಳ ಕಾಲವನ್ನು ಸೂಚಿಸಿರಿ:
**ಆಗಮಿಸಿದ, ಹುಡುಕುವನು,**
45. ಇವುಗಳ ತದ್ಭವ ರೂಪಗಳನ್ನು ಬರೆಯಿರಿ:
**ಅಕ್ಷರ, ನಕ್ಷೆ**
46. ಯಾವುದಾದರೂ ಎರಡು ದ್ವಿರುಕ್ತಿಗಳನ್ನು ಬರೆಯಿರಿ:
47. ಇವುಗಳಿಗೆ ಸಮಾನಾರ್ಥಕ ಪದಗಳನ್ನು ಬರೆಯಿರಿ:
**ರಮಣ, ಖಿತಿ,**
48. ಇವುಗಳಿಗೆ ನಾನಾರ್ಥಕಗಳನ್ನು ಬರೆಯಿರಿ:
**ಮಡಿ, ಅರ್ಥ,**
49. ಇವುಗಳನ್ನು ಸ್ವಂತ ವಾಕ್ಯದಲ್ಲಿ ಬರೆಯಿರಿ:
**ಪರದೇಶಿ, ತರ್ಪಣಬಿಡು,**

**ಆ) ಯಾವುದಾದರೂ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ:** **1x5=5**

50. ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆ.
51. ಮಸ್ತಕಗಳ ಮಹತ್ವ.

**ಇ) ಯಾವುದಾದರೂ ಒಂದು ಪತ್ರಲೇಖನವನ್ನು ಬರೆಯಿರಿ:** **1x4=4**

52. ನಿಮ್ಮ ಕಾಲೇಜಿನಲ್ಲಿ ಆಯೋಜಿಸಿದ್ದ ಗಾಂಧಿ ಜಯಂತಿಯ ಅನುಭವಗಳನ್ನು ಕುರಿತು ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.
53. ನಿಮ್ಮ ವರ್ಗಾವಣೆ ಪತ್ರ ಮತ್ತು ಅಂಕಪಟ್ಟಿ ಕೊಡುವಂತೆ ಕೋರಿ ಪ್ರಾಂಶುಪಾಲರಿಗೆ ಪತ್ರ ಬರೆಯಿರಿ.

**ಈ) ಈ ಗಾದೆಗಳಲ್ಲಿ ಯಾವುದಾದರೂ ಒಂದನ್ನು ವಿಸ್ತರಿಸಿ:** **1x4=4**

54. ಹಣಕ್ಕಿಂತ ಗುಣಮುಖ್ಯ.
55. ಹಾಸಿಗೆ ಇದ್ದಷ್ಟು ಕಾಲು ಚಾಚು.

# ಸ್ವಾಮಿ ವಿವೇಕಾನಂದ ಗ್ರಾಮಾಂತರ ಪದವಿ ಪೂರ್ವ ಕಾಲೇಜು.

**ಚಂದಾಪುರ, ಆನೇಕಲ್ ತಾಲ್ಲೂಕು, ಬೆಂಗಳೂರು-99**

ದ್ವಿತೀಯ ಪಿ.ಯು.ಸಿ. ಮೊದಲನೇ ಪೂರ್ವಸಿದ್ಧತಾ ಪರೀಕ್ಷೆ ಡಿಸೆಂಬರ್-2019

Swamy Vivekananda Rural Pre-University College LIBRARY Acc No Date Chandapura

ಸಮಯ-3ಗಂಟೆ15ನಿಮಿಷಗಳು | ವಿಷಯ-ಕನ್ನಡ | ಅಂಕಗಳು-100

## ವಿಭಾಗ-ಅ

**I ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. 10x1=10**

1. 'ಗಂಡರೋ ನೀವ್ ಭಂಡರೊ' ಎಂದು ಕೇಳಿದವರಾರು ?
2. ಲೋಕದಲ್ಲಿ ನಿಜವಾದ ಮಡಿ ಯಾವುದು ?
3. ಜಾಲಿಯ ಮರದಂತಿರುವವರು ಯಾರು ?
4. ತಾಯಿಯನ್ನು ಯಾವುದಕ್ಕೆ ಹೋಲಿಸಲಾಗಿದೆ ?
5. ಯಾವ ಮರ್ಯಾದೆಯನ್ನು ನಾವು ಮೀರಬಾರದು ?
6. ಬೆಳ್ಳಿಲೋಟ ಏನನ್ನು ಕಳೆದುಕೊಂಡಿತ್ತು ?
7. ಸಿಕಂದರಾಬಾದಿನ ಶಾಲಾ ಬಾಲಕಿ ನೋಡಿದ ಕ್ಷಿಪಣಿಯ ಹೆಸರೇನು ?
8. ಶಿವೇಗೌಡರು ರಾತ್ರೋರಾತ್ರಿ ಆನೆ ಕರೆದುಕೊಂಡು ಹೋದುದ್ದೇಕೆ ?
9. ನಿರೂಪಕರ ಪ್ರಕಾರ ಮುನ್ಸಿಪಾಲಿಟಿ ಪ್ರೆಸಿಡೆಂಟರ ಕರ್ತವ್ಯ ಯಾವುದು ?
10. ಟೆಲಿಫೋನ್ ಸಿಬ್ಬಂದಿ ಯಾರ ವಿರುದ್ಧ ಮುಷ್ಕರ ಹೂಡಿದರು ?

## ವಿಭಾಗ-ಆ

**II ಅ) ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ. 4x2=8**

11. ರಾವಣನಿಗೆ ಸೀತೆಯ ಬಗ್ಗೆ ವೈರಾಗ್ಯ ಮೂಡಿದ ಸಂದರ್ಭವನ್ನು ವಿವರಿಸಿ ?
12. ಯಾವ ಗುಣಗಳಿಲ್ಲದವನು ಡಾಂಭಿಕನೆನಿಸುತ್ತಾನೆ ?
13. ತಾನು ಘೋರತರ ವಿಷ ಕುಡಿಯುವುದಾಗಿ ದ್ರೌಪದಿ ಏಕೆ ಹೇಳುತ್ತಾಳೆ ?
14. ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ ?
15. ಇದ್ದಷ್ಟು ಬುದ್ದಿಯನ್ನು ಹೇಗೆ ಕಳೆದುಕೊಳ್ಳುತ್ತಾರೆ ?

**ಆ) ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ. 3x2=6**

16. ಬ್ರಿಟಿಷರು ಬರುವ ಮೊದಲು ವಾಲ್‌ಪರೈ ಹೇಗಿತ್ತು ?
17. ಎ.ಆರ್. ಕೃಷ್ಣಶಾಸ್ತ್ರಿಗಳ ಭಾಷಣ ಓದಿ ಲೇಖಕರಲ್ಲಿ ಮೂಡಿದ ಭಾವನೆಗಳಾವುವು ?
18. ಕುದುಪನಿಗೆ ಹನಿಗಣ್ಣಾಗಲು ಕಾರಣವೇನು ?
19. ಕಲಾಂ ಅವರ ದೃಷ್ಟಿಯಲ್ಲಿ ಕನಸುಗಳು ಏನಾಗುತ್ತವೆ ?

**ಇ) ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ. 3x2=6**

20. ಕೃಷ್ಣೇಗೌಡನ ಆನೆ ಮೂಡಿಗೆರೆ ಪೇಟೆಗೆ ಹೇಗೆ ಒಗ್ಗಿಕೊಂಡಿತ್ತು ?
21. ನಿರೂಪಕರಿಗೆ ಆನೆಗಳ ಬಗ್ಗೆ ಯಾವ ಅನುಮಾನ ಮೂಡಿತು ?
22. ಡ್ರೈವರ್‌ನ ತಲೆ ಜಜ್ಜಿ ಹೋದದ್ದು ಹೇಗೆ ? ಆನೆ ಅದಕ್ಕೆ ಕಾರಣವೆ ?
23. ಆನೆಯೇ ತಿಪ್ಪಣ್ಣನ ಸಾವಿಗೆ ಕಾರಣವೆಂದು ದುರ್ಗಪ್ಪ ಹೇಳಿದಾಗ ನಿರೂಪಕರ ಪ್ರತಿಕ್ರಿಯೆ ಏನು ?

## ವಿಭಾಗ-ಇ

**III ಅ) ಯಾವುದಾದರೂ ಎರಡು ವಾಕ್ಯಗಳ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 2x3=6**

24. ಅನ್ಯ ಲಿಂಗಗಳ ನೆನೆವನೆ ನಿಮ್ಮ ಭಕ್ತನು.
25. ಎನ್ನವೊಲು ಮುನ್ನಾರು ನವೆದವರುಂಟು.
26. ತೃಣವೇ ಪರ್ವತವಲ್ಲವೇ.

**ಆ) ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 1x3=3**

27. ಈ ಮುಟ್ಟುವಿಕೆ ನಾನು ಊಹಿಸದೆ ಇದ್ದದ್ದನ್ನು ಮಾಡಿದೆ.
28. ಮುಂಬಯಿಯ ಪ್ರಸಿದ್ಧ ನ್ಯಾಯವಾದಿಯಾದರು.

**ಇ) ಯಾವುದಾದರೂ ಒಂದು ವಾಕ್ಯ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 1x3=3**

29. ನಂಗೇನು ಈ ನಾಯಿಗಳನ್ನು ಕಂಡರೆ ಪ್ರೀತಿನಾ ಸ್ವಾಮಿ!
30. ಈ ಕಂಬದೊಳ್ಗೆ ಏನೋ ಸೇರ್‌ಕೊಂಡಿದೆ.

## ವಿಭಾಗ–ಈ

**IV ಅ) ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿ.** **3X4=12**

31. ಭೀಮ ಮತ್ತು ದ್ರೌಪದಿಯ ಸಂಭಾಷಣೆಯ ಸ್ವಾರಸ್ಯವನ್ನು ವಿವರಿಸಿ.
32. ಸಕಾಲಕ್ಕೆ ಒದಗುವ ಸಹಾಯವೇ ಶ್ರೇಷ್ಠ ಎಂಬುದನ್ನು ಕವಿ ಹೇಗೆ ತಿಳಿಸಿದ್ದಾನೆ ?
33. ಸಮಾಜ ಕಂಟಕರ ಬಗೆಗೆ ಪುರಂದರದಾಸರ ಅಭಿಪ್ರಾಯಗಳನ್ನು ಸಂಗ್ರಹಿಸಿರಿ.
34. ಗರತಿ ತವರಿಗೆ ಏನೆಂದು ಹರಸುತ್ತಾಳೆ ?

**ಆ) ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿ.** **2X4=8**

35. ಕೇಂದ್ರ ಸರ್ಕಾರದ ಕಚೇರಿಗಳಲ್ಲಿ ಕನ್ನಡತನವಿಲ್ಲದಿರುವ ಬಗ್ಗೆ ಹಾಮಾನಾ ಹೇಗೆ ಟೀಕಿಸಿದ್ದಾರೆ ?
36. ಬೆಳ್ಳಿಲೋಟ ಕಂಡಾಗ ಧಣಿಯಲ್ಲಿ ಆತಂಕ, ಗಾಬರಿ, ಭಯ ಉಂಟಾಗಲು ಕಾರಣವೇನು ?
37. ತಂದೆ–ತಾಯಿ ಶಿಕ್ಷಕರು ಸೇರಿ ಆದ ತ್ರಿಭುಜವೇ ಉತ್ತಮ ಬದುಕಿಗೆ ಆದರ್ಶ ಮಾದರಿ ಹೇಗೆ ? ವಿವರಿಸಿ.

**ಇ) ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿ.** **2X4=8**

38. ಡ್ರೈವರ್ ಸಾವಿನ ಸುದ್ದಿಯನ್ನು ಶಿವೇಗೌಡ ಮತ್ತಿತರರು ಹೇಗೆ ಮುಚ್ಚಿ ಹಾಕಿದರು ?
39. ಪೋಸ್ಟ್‌ಮನ್ ಜಬ್ಬಾರನ ಬವಣೆಗಳನ್ನು ನಿರೂಪಕರು ಹೇಗೆ ವಿವರಿಸಿದ್ದಾರೆ ?
40. ಡ್ರೈವರ್ ಅಬ್ಬಾಸ್ ಮತ್ತು ಕ್ಲೀನರ್ ಕೃಷ್ಣನ ಸಾವಿಗೆ ಕೃಷ್ಣೇಗೌಡನ ಆನೆ ಕಾರಣವೆ? ವಿವರಿಸಿ.

## ವಿಭಾಗ–ಉ

**V ಅ) ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ.** **1X5=5**

41. ಜಸದಟಿವಂ ಪರಾಭವದ ಪತ್ತುಗೆಯಂ ದೊರೆವೆತ್ತ ತಮ್ಮ ಮಾ
ನಸಿಕೆಯ ಕೇಡನುನ್ನತಿಯ ಬನ್ನಮನನ್ನಭವಾನುಬದ್ಧಮ
ಪ್ಪ ಸುಗತಿಯಂ ಸುಹೃಜ್ಜನದ ಬೇವಸಮಂ ಜನತಾಪವಾದಮಂ
ಬೆಸನಿಗಳಾರುಮೆತ್ತಲಟಿವರ್ ವಿಷಯಾಸವಮತ್ತಚೇತಸರ್ ॥

42. ಅರೆಯಂ ಸೀಳುವೊಡಾನೆ ಮೆಟ್ಟಲಹುದೇ ಚಾಣಂಗಳಿಂದಲ್ಲದೇ ।
ಕಿರುದಾಗಿರ್ದೊಡದೇನುಪಾಯಪರನೋರ್ವಂ ಕೋಟಿಗಿಡಕ್ಕು ಹೆ ॥
–ಮ್ಮರನಿರ್ದೇನದರಿಂದಲೆತ್ತಬಹುದೇ ಬಲ್ಭಾರಮಂ ಸನ್ನೆ ಸಾ ।
ವಿರ ಕಾಲಾಳಿನ ಸತ್ವವೈ ಹರಹರಾ ಶ್ರೀಚೆನ್ನಸೋಮೇಶ್ವರಾ ॥

## ಭಾಷಾಭ್ಯಾಸ

**VI ಅ) ಕೆಳಗಿನ ಪ್ರಶ್ನೆಗಳಿಗೆ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ.** **6X2=12**

43. **ಈ ಪದಗಳಿಗೆ ಅರ್ಥ ಬರೆಯಿರಿ.**
ತೊಟಕು , ಯಾಳಿ
44. **ಈ ಪದಗಳಿಗೆ ನಾನಾರ್ಥಕಗಳನ್ನು ಬರೆಯಿರಿ.**
ತೊರೆ , ಅಂಚು
45. **ಈ ಕೆಳಗಿನ ಪದಗಳ ಕಾಲಸೂಚಕಗಳನ್ನು ಬರೆಯಿರಿ.**
ಓದಿಸುತ್ತಿದ್ದೇವೆ , ಹೇಳಿದರು.
46. **ಈ ನುಡಿಗಟ್ಟುಗಳ ಅರ್ಥ ಬರೆದು ಸ್ವಂತ ವಾಕ್ಯಗಳಲ್ಲಿ ಬಳಸಿ ಬರೆಯಿರಿ.**
ಕಾಲುಕೀಳು, ತಲೆಮೇಲೆಮೆರಸು
47. **ಇವುಗಳ ತದ್ಭವ ರೂಪ ತಿಳಿಸಿ.**
ಯಶ, ಹಗೆ
48. **ಇವುಗಳ ಗುಣವಾಚಕಗಳನ್ನು ಗುರುತಿಸಿ.**
ಸುಣ್ಣದಹರಳು , ಪುಟ್ಟಸಂಸಾರ
49. **ಇವುಗಳ ವಿಭಕ್ತಿ ಪ್ರತ್ಯಯಗಳನ್ನು ಗುರುತಿಸಿ.**
ಬಲ್ಲವರಿಂದ , ವಲ್ಲಭನ

**ಆ) ಯಾವುದಾದರೂ ಒಂದನ್ನು ಕುರಿತು ಪ್ರಬಂಧವನ್ನು ಬರೆಯಿರಿ.** **1X5=5**

50. ಉಜ್ವಲ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳ ಸಬಲೀಕರಣ.
51. ಬದುಕುವ ಕಲೆ.

**ಇ) ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ.** **1X4=4**

52. ಪರೀಕ್ಷೆಯ ಸಂದರ್ಭದಲ್ಲಿ ಸಮರ್ಪಕ ವಿದ್ಯುತ್ ಸರಬರಾಜನ್ನು ಕೋರಿ ಕಾರ್ಯನಿರ್ವಾಹಕ ಅಭಿಯಂತರರಿಗೆ ಪತ್ರ ಬರೆಯಿರಿ.
53. ನಿಮ್ಮ ಕಾಲೇಜಿನ ವಾರ್ಷಿಕೋತ್ಸವಕ್ಕೆ ಆಹ್ವಾನಿಸುವಂತೆ ನಿಮ್ಮ ಗೆಳೆಯ / ಗೆಳತಿಗೆ ಒಂದು ಪತ್ರ ಬರೆಯಿರಿ.

**ಈ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿರಿ.** **1X4=4**

54. ಅಡಕೆಗೆ ಹೋದ ಮಾನ ಆನೆ ಕೊಟ್ಟರೂ ಬಾರದು.
55. ಅಪಾಯ ಬಂದಾಗ ಉಪಾಯದಿಂದ ಗೆಲ್ಲಬೇಕು.

# ಸ್ವಾಮಿ ವಿವೇಕಾನಂದ ಗ್ರಾಮಾಂತರ ಪದವಿ ಪೂರ್ವ ಕಾಲೇಜು

ಚಂದಾಪುರ, ಆನೇಕಲ್ ತಾಲ್ಲೂಕು. ಬೆಂಗಳೂರು-99

ದ್ವಿತೀಯ ಪಿ ಯು ಸಿ ಎರಡನೇ ಪೂರ್ವಸಿದ್ಧತಾ ಪರೀಕ್ಷೆ ಜನವರಿ- 2020

ಸಮಯ: 3 ಗಂಟೆ 15 ನಿಮಿಷ ವಿಷಯ: ಕನ್ನಡ ಅಂಕಗಳು : 100

Swamy Vivekananda Rural Pre-University College Chandapura LIBRARY ACC No.......... Date..........

## ಅ-ವಿಭಾಗ

**I. ಈ ಕೆಳಕಂಡ ಪ್ರಶ್ನೆಗಳಿಗೆ ಒಂದೊಂದು ಪೂರ್ಣವಾಕ್ಯದಲ್ಲಿ ಉತ್ತರಿಸಿ.** 10X1=10

1. ಮಯತನೂಜೆ ಎಂದರೆ ಯಾರು?
2. ಬಸವಣ್ಣನವರ ವಚನಗಳ ಅಂಕಿತ ಯಾವುದು?
3. ಯಾವುದರಿಂದ ಪರಿಮಳವನ್ನು ಅರಿಯಬಹುದು?
4. ಹಲವು ಹಳ್ಳಗಳು ಸೇರಿ ಏನಾಗುತ್ತದೆ?
5. ಕೆಂಪುಪಟ್ಟಿಗೆ ಸೇರಿದ ಪ್ರಾಣಿ ಯಾವುದು?
6. ಮುದ್ದಣ ಅರಮನೆಯಿಂದ ಬರುತ್ತಿರುವುದನ್ನು ನಿಂತು ನೋಡಿದವರಾರು?
7. ಮೂರು ಕಾಲಿನ ಕುರ್ಚಿ ಎಲ್ಲಿದೆ ?
8. ಜಬ್ಬಾರ್ ವೆಟರ್ನರಿ ಆಸ್ಪತ್ರೆಗೆ ಬರಲು ಕಾರಣವೇನು?
9. ನಾಗರಾಜ ಕೋವಿ ಹಿಡಿದು ಎಲ್ಲಿ ಕುಳಿತಿದ್ದ?
10. ಪೊಲೀಸರು ಏನೆಂದು ಮಹಜರು ಬರೆದುಕೊಂಡರು?

## ಆ-ವಿಭಾಗ

**II. ಅ. ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ.** 4X2=08

11. ಬಾನು ಮತ್ತು ಮರದ ನಿತ್ಯನೂತನತೆಯ ಬಗ್ಗೆ ಕವಿ ಏನು ಹೇಳಿದ್ದಾರೆ?
12. ಮುಂಬೈನ ಅವಸರದ ಜೀವನ ಚಿತ್ರಕ್ಕೆ ಎರಡು ಉದಾಹರಣೆ ನೀಡಿ.
13. ಯಾವ ಸಂದೇಶವನ್ನು ನೀಡುವ ರೀತಿಯಲ್ಲಿ ಜೀಸಸ್ ಶಿಲುಬೆಯೇರಿದ್ದಾನೆ?
14. ಮುದುಕಿಯು ಯಾರನ್ನು ಏನೆಂದು ಪ್ರಾರ್ಥಿಸುವಳು ?
15. ಆತ್ಮಕ್ಕೆ ಕಮಟು ಹತ್ತುವುದು ಎಂದರೇನು?

**ಆ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ.** 3X2=06

16. ಕೊನೆಯಲ್ಲಿ ಬಸಲಿಂಗನಿಗೆ ಏನೆಂದು ನಿಶ್ಚಿತವಾಗತೊಡಗಿತ್ತು?
17. ಕಲಾಂ ಅವರು ತಾವು ಆತ್ಮಕಥೆ ಬರೆದುದು ಏತಕ್ಕಾಗಿ?
18. ಮನೋರಮೆ ಕತೆ ಹೇಳೆಂದು ಕೇಳಲು ಕಾರಣವೇನು?
19. ಪಟ್ಟಣದ ಹೊಟೇಲಿನ ಕಟ್ಟಡ ಹೇಗಿದೆ?

**ಇ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು-ಮೂರು ವಾಕ್ಯಗಳಲ್ಲಿ ಉತ್ತರಿಸಿ.** 3X2=06

20. ಫಾರೆಸ್ಟ್ ಡಿಪಾರ್ಟ್‌ಮೆಂಟಿನ ನಂಬರ್ ಒನ್ ಎನಿಮಿಗಳು ಯಾರು ಯಾರು?
21. ನಾಯನ್ನು ಕೊಲ್ಲದೆ ನೌಕರರು ಸುಳ್ಳು ಹೇಳಿರುವರೆಂದು ನಿರೂಪಕರು ಯಾವ ಸಲಹೆ ನೀಡಿದರು?
22. ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದ್ದ?
23. ಅರಣ್ಯ ಇಲಾಖೆಯವರು ನಾಗರಾಜನನ್ನು ಕುರಿತು ಏನೆಂದು ಜಾಹಿರಾತು ನೀಡಿದರು?

## ಇ-ವಿಭಾಗ

**III. ಅ. ಯಾವುದಾದರೂ ಎರಡನ್ನು ಕುರಿತು ಸಂದರ್ಭ ಸೂಚಿಸಿ ವಿವರಿಸಿ.** 2X3=06

24. ವೇಷ ಮರೆಸಿವೆ ಅಷ್ಟೆ - ಈ ಎಲ್ಲ ಕೇಡುಗಳು.
25. ಇನ್ನೊಂದು ಸೇರ್ಪಡೆ ಆ ಲೀಲಾ ಮಾತ್ರನಿಗೆ.
26. ಒಮ್ಮೆ ನಕ್ಕೇ ನಗುತ್ತೇವೆ.

**ಆ. ಯಾವುದದರೂ ಒಂದನ್ನು ಕುರಿತು ಸಂದರ್ಭ ಸೂಚಿಸಿ ವಿವರಿಸಿ.** 1X3=03

27. ಹಾಡುವುದು ಅವುಗಳಿಗೆ ಅನಿವಾರ್ಯ; ಅವುಗಳ ಕರ್ಮ!
28. ಕನ್ನಡಿಗರು ಮೊದಲು ಕನ್ನಡಿಗರಾಗಬೇಕು.

**ಇ. ಯಾವುದಾದರೂ ಒಂದನ್ನು ಕುರಿತು ಸಂದರ್ಭ ಸೂಚಿಸಿ ವಿವರಿಸಿ.** 1X3=03

29. ಆನೆ ಬೇಲಿ ದಾಟಿ ಹೋಯ್ತು ಸಾರ್.
30. ಕೋವಿ ಸಿಕ್ಕಿದೆ ಆದರೆ ಹಣ ಸಿಗಲಿಲ್ಲ.

## ಈ–ವಿಭಾಗ

**IV. ಅ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** 3X4=12

31.ತನಗೊದಗಿದ ಸಂಕಟವನ್ನು ಹೇಳಿಕೊಳ್ಳುವ ದ್ರೌಪದಿಯ ಸ್ವಗತದ ನುಡಿಗಳಾವುವು?

32.'ಬಂಗಾರ ನಿನಗ ಸ್ಥಿರವಲ್ಲ' ಎಂಬ ಮಾತಿನ ಸ್ವಾರಸ್ಯವನ್ನು ವಿವರಿಸಿರಿ.

33.ಯಾವ ಸ್ಥಳಗಳಲ್ಲಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ? ಚರ್ಚಿಸಿ.

34.ವೃದ್ಧರ ತವಕ-ತಲ್ಲಣಗಳನ್ನು ಕವಯಿತ್ರಿ ಹೇಗೆ ಚಿತ್ರಿಸಿದ್ದಾರೆ?

**ಆ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** 2X4=08

35.ತಮ್ಮನ್ನು ಭೇಟಿಯಾದ ಮಕ್ಕಳಿಗೆ ಕಲಾಂ ಹೇಳಿದ್ದೇನು?

36.ಮುದ್ದಣ – ಮನೋರಮೆಯರ ಸಂವಾದದ ಸ್ವಾರಸ್ಯವನ್ನು ವಿವರಿಸಿ.

37.ಹಳ್ಳಿಯ ಹೋಟೇಲುಗಳಲ್ಲಿ ಬಂದ ನವೀನತೆಯ ಕುರಿತು ಬರೆಯಿರಿ.

**ಇ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ.** 2X4=08

38.ಪುಟ್ಟಯ್ಯ ತನ್ನ ಅಸಹಾಯಕತೆಯನ್ನು ಹೇಗೆ ವಿವರಿಸುತ್ತಾನೆ?

39.ನಾಗರಾಜನ ನಿಗೂಢ ಸಾವಿನ ಬಗ್ಗೆ ಜನರ ಅಭಿಪ್ರಾಯಗಳೇನು?

40.ತನ್ನ ಆನೆಯ ಬಗ್ಗೆ ಕೃಷ್ಣೇಗೌಡನಲ್ಲಿ ಬೇಸರ ಮೂಡಲು ಕಾರಣಗಳೇನು?

## ಉ–ವಿಭಾಗ

**V. ಅ. ಒಂದು ಪದ್ಯದ ಭಾವಾರ್ಥ ಬರೆಯಿರಿ.** 1X5=05

41. ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯೆನೆನ್ನ ಕುಲದ ಪೆಂಪಳಿವಿನೆಗೆಂ ॥

42. ಪೊಡೆಯೊಳ್ ತುಂಬಿರೆ ಪಂಕ ಮೇಲೆ ತೊಳೆಯಲ್ ತಾಂ ಶುದ್ಧನೇನಪ್ಪನೇ ।
ಕಡುಪಾಪಂ ಬಲು ಮೀಯಲಾತ ಶುಚಿಯೇ ಕಾಕಾಳಿ ತಾಂ ಮೀಯದೆ ॥
ಗುಡಪಾನಂಗಳೊಳದ್ದೆ ಬೇವಿನ ಫಲಂ ಸ್ವಾದಪ್ಪುದೇ ಲೋಕದೊಳ್ ।
ಮಡಿಯೇ ನಿರ್ಮಲ ಚಿತ್ತವೈ ಹರಹರಾ ಶ್ರೀಚೆನ್ನಸೋಮೇಶ್ವರಾ ॥

## ಭಾಷಾಭ್ಯಾಸ

**ಆ. ಯಾವುದಾದರೂ ಆರು ಪ್ರಶ್ನೆಗಳಿಗೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ.** 6X2=12

43.ಪದಗಳ ಅರ್ಥ ಬರೆಯಿರಿ : ಫಣಿ, ಸರಿವ.

44.ಕ್ರಿಯಾಪದಗಳ ಧಾತು ಗುರುತಿಸಿರಿ : ತಿಕ್ಕುವೆನು, ಬಂದಳು.

45.ತದ್ಭವ ರೂಪಗಳನ್ನು ಬರೆಯಿ : ಸಂಸ್ಕೃತ, ಶ್ರೀ.

46.ಇವುಗಳ ವಿಭಕ್ತಿ ಪ್ರತ್ಯಯಗಳನ್ನು ಗುರುತಿಸಿ ಹೆಸರಿಸಿ : ಮನೆಯಿಂದ, ಆಸ್ಪತ್ರೆಗೆ.

47.ಗುಣವಾಚಕಗಳನ್ನು ಗುರುತಿಸಿರಿ : ನಳಿನಾನನೆ, ದೊಡ್ಡಮರ.

48.ಸ್ವಂತ ವಾಕ್ಯಗಳಲ್ಲಿ ಬರೆಯಿರಿ : ಬಾಯಿತುರಿಕೆ, ಮೊರೆಯಿಡು.

49.ಸಮಾನಾರ್ಥಕಗಳನ್ನು ಬರೆಯಿರಿ : ಹಣತೆ, ಯುದ್ಧ.

**ಇ. ಯಾವುದಾದರೂ ಒಂದನ್ನು ಕುರಿತು ಪ್ರಬಂಧ ಬರೆಯಿರಿ.** 1X5=05

50.ಪೌರತ್ವ ಕಾಯ್ದೆ ತಿದ್ದುಪಡಿ.

51.ಭಾರತದಲ್ಲಿ ನಿರುದ್ಯೋಗ ಸಮಸ್ಯೆ.

**ಈ.ಯಾವುದಾದರು ಒಂದನ್ನು ಕುರಿತು ಪತ್ರ ಲೇಖನ ಬರೆಯಿರಿ** 1X4=04

52.ನಿಮ್ಮ ದ್ವಿತೀಯ ಪಿಯುಸಿ ಪರೀಕ್ಷಾ ಸಿದ್ಧತೆಗೆ ನಿಮ್ಮ ಕಾಲೇಜಿನಲ್ಲಿ ಮಾಡಿಸುತ್ತಿರುವ ಅಭ್ಯಾಸಗಳನ್ನು ಕುರಿತು ಗೆಳೆಯ/ಗೆಳತಿಗೆ ಒಂದು ಪತ್ರ ಬರೆಯಿರಿ.

53.ನಿಮ್ಮ ಊರಿಗೆ ಸರಿಯಾದ ಸಮಯಕ್ಕೆ ಬಸ್ ಸೌಕರ್ಯ ನೀಡುವಂತೆ ಸಂಬಂಧಿಸಿದ ಕ.ರಾ.ರ.ಸಾ.ಸಂಸ್ಥೆಯ ಅಧಿಕಾರಿಗಳಿಗೆ ಪತ್ರ ಬರೆಯಿರಿ.

**ಉ. ಯಾವುದಾದರೂ ಒಂದನ್ನು ಗಾದೆಯನ್ನು ವಿಸ್ತರಿಸಿ ಬರೆಯಿರಿ.** 1X4=04

54.'ಕೆಲಬರು ಗಳಿಸಿದೊಡೆ ಕೆಲರುಂಡು ಜಾರುವರು'

55.ಕೋಟಿ ವಿದ್ಯೆಗಿಂತ ಮೇಟಿ ವಿದ್ಯೆ ಮೇಲು.

***